# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**:- ಮೂಲತ: ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ನೌಕರರಾದ ಶ್ರೀ ವಿಜಯ ನಾಯ್ಕ ಜಿ, ಸಹಾಯಕ ಫೋರ್ಮನ್ (ಮೆಕ್ಯಾನಿಕಲ್) ಇವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಒಪ್ಪಂದದ ಆಧಾರದ ಮೇಲೆ ನೇಮಿಸಿದ ಸೇವೆಯನ್ನು ವಿಸ್ತರಿಸಿ ಮುಂದುವರೆಸುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 151 ಸೇಶಿಕಾ 2015, ದಿನಾಂಕ: 06.02.2015
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 518 ಎಸ್.ಎಸ್.ಕೆ. 2020, ದಿ: 05.02.2021.
3. ಮಾನ್ಯ ಶಾಸಕರು ಹಾಗೂ ಮಾಜಿ ಸಚಿವರು ಹಡಗಲಿ ವಿಧಾನ ಸಭಾ ಕ್ಷೇತ್ರ, ಬಳ್ಳಾರಿ ಜಿಲ್ಲೆ ಇವರ ಪತ್ರ ದಿನಾಂಕ: 09.12.2021.

****

**ಪ್ರಸ್ತಾವನೆ**:

ಮೂಲತ: ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ನೌಕರರಾದ ಶ್ರೀ ವಿಜಯ ನಾಯ್ಕ ಜಿ, ಸಹಾಯಕ ಫೋರ್ಮನ್ (ಮೇಕ್ಯಾನಿಕಲ್) ಇವರನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೂವಿನ ಹಡಗಲಿ ಇಲ್ಲಿನ ಆಕೃತಿ ರಚನಾಕಾರರ ಹುದ್ದೆಯಲ್ಲಿ ಕರ್ನಾಟಕ ಸಿವಿಲ್ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 15 (1) (ಬಿ) (ii) ರನ್ವಯ ಒಂದು ವರ್ಷದ ಅವಧಿಗೆ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ:06.02.2015 ರ ಸರ್ಕಾರದ ಆದೇಶದಲ್ಲಿ ಒಪ್ಪಂದದ ಆಧಾರದ ಮೇಲೆ ನೇಮಿಸಿಕೊಳ್ಳಲಾಗಿತ್ತು. ತದನಂತರ ಸರ್ಕಾರ ವಿವಿಧ ಆದೇಶಗಳಲ್ಲಿ ಸದರಿಯವರ ಒಪ್ಪಂದದ ಆಧಾರದ ಮೇಲಿನ ಸೇವೆಯನ್ನು ಮುಂದುವರೆಸುತ್ತಾ ಬಂದಿದ್ದು, ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ದಿ:06.02.2021 ರಿಂದ ಒಂದು ವರ್ಷದ ಅವಧಿಗೆ ಮುಂದುವರೆಸಲಾಗಿದ್ದು ದಿನಾಂಕ:05.02.2022 ಕ್ಕೆ ಮುಕ್ತಾಯಗೊಳ್ಳಲಿದೆ.

ಮಾನ್ಯ ಶಾಸಕರು ಹಾಗೂ ಮಾಜಿ ಸಚಿವರು ಹಡಗಲಿ ವಿಧಾನ ಸಭಾ ಕ್ಷೇತ್ರ, ಬಳ್ಳಾರಿ ಜಿಲ್ಲೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ಶ್ರೀ ವಿಜಯ ನಾಯ್ಕ ಜಿ, ಸಹಾಯಕ ಫೋರ್‌ಮೆನ್ (ಮೆಕಾನಿಕಲ್), ಹಟ್ಟಿ ಚಿನ್ನದ ಗಣಿ (ಲೋಹ ವಿಭಾಗ) ಗುತ್ತಿಗೆ ಆಧಾರದ ಮೇಲೆ ಗ್ರಾ.ಕು.ನೀ. ಮತ್ತು ನೈ ಉಪ ವಿಭಾಗ, ಹೂವಿನಹಡಗಲಿ ಇಲ್ಲಿನ ಕಿರಿಯ ಇಂಜಿನಿಯರ್ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿ ಗುತ್ತಿಗೆ ಅವಧಿಯು ದಿ:05.02.2022 ರಂದು ಅಂತ್ಯಗೊಳ್ಳಲಿದ್ದು ಸದರಿಯವರು ತಾಲ್ಲೂಕಿನಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವುದರಿಂದ ಇನ್ನು 2 ವರ್ಷಗಳ ಅವಧಿಗೆ ಮುಂದುವರೆಸುವಂತೆ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಶಾಸಕರು ಹಾಗೂ ಮಾಜಿ ಸಚಿವರು ಹಡಗಲಿ ವಿಧಾನ ಸಭಾ ಕ್ಷೇತ್ರ, ಬಳ್ಳಾರಿ ಜಿಲ್ಲೆ ಇವರು ಕೋರಿರುವಂತೆ ಪರಿಶೀಲಿಸಿದ್ದು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ಸಾಕಷ್ಟು ಕಿರಿಯ ಇಂಜಿನಿಯರ್ ಹುದ್ದೆಗಳು ಖಾಲಿ ಇರುವುದರಿಂದ ಶ್ರೀ ವಿಜಯ ನಾಯ್ಕ ಜಿ., ಇವರ ಸೇವೆಯು ಅವಶ್ಯವಿರುತ್ತದೆ. ಮಆದ್ದರಿಂದ, ಸದರಿಯವರನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೂವಿನ ಹಡಗಲಿ ಇಲ್ಲಿನ ಕಿರಿಯ ಇಂಜಿನಿಯರ್ ಹುದ್ದೆಯಲ್ಲಿ ಮುಂದಿನ ಒಂದು ವರ್ಷದ ಅವಧಿಗೆ ಮುಂದುವರೆಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ:-

..2

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 9 ಎಸ್.ಎಸ್.ಕೆ. 2022, ಬೆಂಗಳೂರು**
**ದಿನಾಂಕ :25.01.2022**

ಪ್ರಸ್ತಾವನೆಗಳಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರವು ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 15(1) (ಬಿ) (ii) ರನ್ವಯ ಈ ಆದೇಶದೊಂದಿಗೆ ಲಗತ್ತಿಸಿರುವ ಷರತ್ತು ಮತ್ತು ನಿಬಂದನೆಗಳಿಗೆ ಒಳಪಟ್ಟು, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ನೌಕರರಾದ ಶ್ರೀ ವಿಜಯ ನಾಯ್ಕ ಜಿ., ಸಹಾಯಕ ಫೋರ್ಮನ್ (ಮೇಕ್ಯಾನಿಕಲ್) ಇವರು ಗುತ್ತಿಗೆ / ಒಪ್ಪಂದದ ಆಧಾರದ ನಿಯೋಜನಾ ಅವಧಿಯನ್ನು ದಿನಾಂಕ: 06.02.2022 ರಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ವಿಸ್ತರಿಸಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೂವಿನ ಹಡಗಲಿ ಇಲ್ಲಿನ ಕಿರಿಯ ಇಂಜಿನಿಯರ್ ಹುದೆಯಲ್ಲಿ ಮುಂದುವರೆಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಅನುಸಾರ
ಮತ್ತು ಅವರ ಹೆಸರಿನಲ್ಲಿ

ಕೆ. ನದೀಮ್ 25/1/22

**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
25/01/2022

**ಇವರಿಗೆ :**

1. ಮಹಾಲೇಖಪಾಲರು, (ಆ ,ಮತ್ತು ಇ) ಕರ್ನಾಟಕ, ಬೆಂಗಳೂರು
2. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು
3. ವ್ಯವಸ್ಥಾಪಕ ನಿರ್ದೇಶಕರು, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ, 3ನೇ ಮಹಡಿ, ಕೆ.ಹೆಚ್.ಬಿ. ಶಾಪಿಂಗ್ ಕಾಂಪ್ಲೇಕ್ಸ್, ರಾಷ್ಟ್ರೀಯ ಕ್ರೀಡಾ ಗ್ರಾಮ, ಕೋರಮಂಗಳ, ಬೆಂಗಳೂರು.
4. ಪ್ರಧಾನ ವ್ಯವಸ್ಥಾಪಕರು (ಸಮನ್ವಯ), ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ, ಹಟ್ಟಿ ರಾಯಚೂರು ಜಿಲ್ಲೆ.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯನಗರ
6. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು
7. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
8. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಹರಪನಹಳ್ಳಿ.
9. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೂವಿನಹಡಗಲಿ
10. ಸಂಬಂಧಪಟ್ಟ ನೌಕರರಿಗೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ.
12. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
13. ಗ್ರಾ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ-1) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
14. ಕಂಪ್ಯೂಟರ್ ಸೆಲ್ / ಹೆಚ್ಚುವರಿ ಪ್ರತಿ / ರಕ್ಷಾ ಕಡತ.

## ಒಪ್ಪಂದದ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು

1. **ಅವಧಿ:** ಶ್ರೀ ವಿಜಯ ನಾಯ್ಕ ಜಿ., ಸಹಾಯಕ ಫೋರ್ಮನ್ (ಮೆಕ್ಯಾನಿಕಲ್), ಇವರ ಒಪ್ಪಂದದ ಆಧಾರದ ಮೇಲೆ ನೇಮಕಾತಿಯ ಅವಧಿಯು ದಿನಾಂಕ:06.02.2022 ರಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಮಾತ್ರ ಇರುತ್ತದೆ.
2. **ಗುತ್ತಿಗೆ ನೇಮಕಾತಿಯ ಪ್ರಾರಂಭ ಹಾಗೂ ಅಂತ್ಯ:** ಸದರಿ ನೌಕರರ ಒಪ್ಪಂದದ ನಿಯೋಜನಾ ನೇಮಕಾತಿಯು ದಿನಾಂಕ:06.02.2022 ರಿಂದ ಪ್ರಾರಂಭಗೊಂಡು ಹುದ್ದೆಯ ಪ್ರಭಾರವನ್ನು ಹಿಂದಕ್ಕೆ ವಹಿಸಿಕೊಟ್ಟ ದಿನಾಂಕದಂದು ಮುಕ್ತಾಯಗೊಳ್ಳುತ್ತದೆ.
3. **ವೇತನ ಮತ್ತು ಇತರೆ ಭತ್ಯೆಗಳು:** ಶ್ರೀ ವಿಜಯನಾಯ್ಕ, ಸಹಾಯಕ ಫೋರ್ಮನ್ (ಮೆಕ್ಯಾನಿಕಲ್)ಇವರು ಒಪ್ಪಂದದ ನೇಮಕಾತಿಯಅವಧಿಯಲ್ಲಿ ಅವರ ಮಾತೃ ಇಲಾಖೆಯಲ್ಲಿ ಪಡೆಯುತ್ತಿದ್ದವೇತನ, ತುಟ್ಟಿಭತ್ಯೆ, ಕಾರ್ಯನಿರ್ವಹಿಸುವ ಸ್ಥಳಕ್ಕೆ ಅನ್ವಯಿಸುವ ಮನೆ ಬಾಡಿಗೆ ಭತ್ಯೆ, ನಗರ ಪರಿಹಾರ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಆದರೆ, ನಿಯೋಜನೆಯ ಭತ್ಯೆ, ಅನ್ಯ ಸೇವಾ ಭತ್ಯೆ ಅಥವಾ ಇನ್ನಾವುದೇ ಭತ್ಯೆ ಹೆಚ್ಚಿನ ಕಾಲದ ಭತ್ಯೆ, ಬೋನಸ್, ಅನುಗ್ರಹ ಪೂರ್ವ ಭತ್ಯೆ ಪಡೆಯಲು ಅರ್ಹರಲ್ಲ.
4. **ರಜಾ ನಿಯಮಗಳು:** ಇವರ ಮಾತೃ ಇಲಾಖೆಯಲ್ಲಿನ ರಜಾ ನಿಯಮಗಳಿಗೆ ಅರ್ಹರಿರುತ್ತಾರೆ.
5. **ರಜಾ ವೇತನ ವಂತಿಗೆ:** ಅಧಿಕಾರಿಯವರ ಮೂಲ ವೇತನದ ಶೇಕಡಾ 11 ರಷ್ಟನ್ನು ರಜಾ ವೇತನ ವಂತಿಗೆಯಾಗಿ ಸರ್ಕಾರವು ಪಾವತಿಸುತ್ತದೆ.
6. **ಭವಿಷ್ಯ ನಿಧಿ ವಂತಿಗೆ:** ಅಧಿಕಾರಿಯು ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇ.12 ರಷ್ಟನ್ನು ಸರ್ಕಾರದ ವತಿಯಿಂದ ವಂತಿಗೆ, ಮತ್ತು ಅಧಿಕಾರಿಯ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇಕಡಾ 12 ರಷ್ಟನ್ನು ವಂತಿಗೆಯಾಗಿ ತಿಂಗಳಿನ ಸಂಬಳದಲ್ಲಿ ಕಟಾಯಿಸಿ, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ, ಬೆಂಗಳೂರು ರವರಿಗೆ ಪಾವತಿಸತಕ್ಕದ್ದು.
7. **ಉಪದಾನ ವಂತಿಗೆಗಳು:** ಸರ್ಕಾರವು ಪ್ರತಿ ತಿಂಗಳು 8.33% ರಷ್ಟು ವೇತನ ಮತ್ತು ಅದಕ್ಕೆ ಸಮನಾದ ತುಟ್ಟಿ ಭತ್ಯೆಯೊಂದಿಗೆ ಉಪದಾನ ವಂತಿಗೆಯಾಗಿ ನೀಡುತ್ತದೆ.
8. **ವೈದ್ಯಕೀಯ ರಿಯಾಯ್ತಿ:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963 ಅನ್ವಯ ವೈದ್ಯಕೀಯ ವೆಚ್ಚವನ್ನು ಪಡೆಯಲು ಅರ್ಹರಿರುತ್ತಾರೆ.
9. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಿರಿಯ ಇಂಜಿನಿಯರ್ ಹುದ್ದೆಗೆ ನಿಗದಿಪಡಿಸಿರುವ ಕೆಲಸಗಳನ್ನು ಹಾಗೂ ಸರ್ಕಾರವು / ಮೇಲಾಧಿಕಾರಿಗಳು ಕಾಲಕಾಲಕ್ಕೆ ವಹಿಸಿಕೊಡುವ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.
10. 1966 ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957 ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮಾವಳಿಗಳಿಗೆ ತಾನಾಗಿಯೇ ಮುಕ್ತಾಯವಾಗುತ್ತದೆ.
11. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.
12. ಶ್ರೀ ವಿಜಯ ನಾಯ್ಕ ಜಿ., ಸಹಾಯಕ ಫೋರ್ಮನ್ (ಮೆಕ್ಯಾನಿಕಲ್), ಇವರು ಕಿರಿಯ ಇಂಜಿನಿಯರ್ ಹುದ್ದೆಯ ಕೆಲಸ ಕಾರ್ಯಗಳನ್ನು ಶ್ರದ್ಧಾಭಕ್ತಿಯಿಂದ ನಿರ್ವಹಿಸತಕ್ಕದ್ದು ಹಾಗೂ ತಮ್ಮ ಕರ್ತವ್ಯಗಳನ್ನು ನಿರ್ವಹಿಸುವಾಗ ತಿಳಿದು ಬರುವಂತೆ ಕಚೇರಿಯ ಅಧಿಕೃತ, ಗೌಪ್ಯ ಮಾಹಿತಿಗಳ ಬಗ್ಗೆ ಕಟ್ಟು ನಿಟ್ಟಾಗಿ ಗೌಪತ್ಯೆಯನ್ನು ಕಾಪಾಡತಕ್ಕದ್ದು.

..2

13. ಅಧಿಕಾರಿಯ/ನೌಕರರ ದುರ್ನಡತೆಯಿಂದ ಸರ್ಕಾರಕ್ಕೆ ಉಂಟಾಗಿರುವ ಯಾವುದೇ ನಷ್ಟಗಳನ್ನು ಭರಿಸಿಕೊಡಲು ಅಧಿಕಾರಿಯು ಬಾಧ್ಯತೆಯುಳ್ಳವರಾಗಿರುತ್ತಾರೆ.
14. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ ಐವತ್ತು (ರೂ.50-00) ರೂಪಾಯಿಗಳ ಮೌಲ್ಯದ ಛಾಪಾ ಕಾಗದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸಲ್ಲಿಸುವುದು.

ದಿನಾಂಕ:25.01.2022
ಬೆಂಗಳೂರು

**(ಕೆ.ನದೀಮ್ ಅಹ್ಮದ್)** 25/1/22
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
25/01/2022